ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ
ಶ್ರೀರಂಗಪಟ್ಟಣ

ಸಿ.ಸಿ.293/2018

| | |
|---|---|
| ಸಿ.ಡಬ್ಲ್ಯೂ ಃ | 2 |
| ಪಿ.ಡಬ್ಲ್ಯೂ ಃ | 5 |

| | | |
|---|---|---|
| ಸಾಕ್ಷಿದಾರರ ಹೆಸರು | ಃ | ಪುಟ್ಟಮ್ಮ |
| ತಂದೆ/ ಪತಿಯ ಹೆಸರು | ಃ | ಬಸವೇಗೌಡ |
| ವಯಸ್ಸು | ಃ | 73 ವರ್ಷ |
| ವೃತ್ತಿ | ಃ | ಮನೆಕೆಲಸ |
| ವಾಸ | ಃ | ಅಜ್ಜಹಳ್ಳಿ |

**ಸಾಕ್ಷಿಗೆ ಪ್ರಮಾಣ ವಚನ ಮಾಡಿಸಿದ ದಿನಾಂಕಃ 02.09.2025**

**ಮುಖ್ಯ ವಿಚಾರಣೆಃ ಮಾನ್ಯ ಎ ಪಿ ಪಿ ರವರಿಂದ**

ನನಗೆ ಚಾಸಾ-1 ರವರ ಪರಿಚಯ ಇರುತ್ತದೆ. ಆರೋಪಿ ನನ್ನ ತಂಗಿ ಮಗ ಇರುತ್ತಾರೆ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ. ನಾನು ಯಾವುದೇ ಜಗಳವನ್ನು ನೋಡಿರುವುದಿಲ್ಲ. ಪೋಲೀಸರು ಮಹಜರ್ ಗೆ ನನ್ನ ಸಹಿಯನ್ನು ಪಡೆದುಕೊಂಡಿರುತ್ತಾರೆ. ಅದರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿರುವುದಿಲ್ಲ. ಪೋಲೀಸರು ಸಹಿ ಮಾಡು ಎಂದು ಹೇಳಿದ್ದರಿಂದ ನಾನು ಸಹಿ ಮಾಡಿರುತ್ತೇನೆ. ಸಾಕ್ಷಿಗೆ ಈಗ ಪಂಚನಾಮೆಯನ್ನು ತೋರಿಸಿದ್ದು, ಅದರಲ್ಲಿ ಇರುವ ಅವರ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿಪಿ-1 ಎಂದು, ಅದರಲ್ಲಿ ಇರುವ ಸಾಕ್ಷಿಯ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ಮಾನ್ಯ ಸ.ಸ.ಅ. ಅವರು ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡುವಂತೆ ಕೋರಿಕೊಂಡಿದ್ದು, ಆಲಿಸಿ ಅನುಮತಿ ನೀಡಲಾಯಿತು)

ಪಾಟಿ ಸವಾಲುಃ ಮಾನ್ಯ ಸ.ಸ.ಅ ರವರಿಂದ

ದಿಃ 22.11.2017 ರಂದು ಪೋಲೀಸರು ನನ್ನನ್ನು ಹಾಗೂ ಚಾಸಾ-3 ರವರನ್ನು ಪಂಚನಾಮೆ ಮಾಡುವ ಸಲುವಾಗಿ ಕರೆದಿರುತ್ತಾರೆ ಎಂದರೆ ಸರಿಯಲ್ಲ. ಅದಕ್ಕೆ ನಾನು ಮತ್ತು

ಚಾಸಾ-3 ರವರು ಒಪ್ಪಿಕೊಂಡೆವು ಎಂದರೆ ಸರಿಯಲ್ಲ. ನಂತರ ನಾನು ಮತ್ತು ಚಾಸಾ-3 ರವರು ಘಟನಾ ಸ್ಥಳಕ್ಕೆ ಹೋಗಿದ್ದು, ಅಲ್ಲಿ ಪೋಲೀಸರು ನಮ್ಮ ಸಮಕ್ಷಮ ಪಂಚನಾಮೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ನಂತರ ನಾವು ಸದರಿ ಪಂಚನಾಮೆಗೆ ಸಹಿ ಮಾಡಿರುತ್ತೇವೆ ಎಂದರೆ ಸರಿಯಲ್ಲ. ಪೋಲೀಸರು ಘಟನಾ ಸ್ಥಳದಲ್ಲಿ ಒಂದು ಪ್ಲಾಸ್ಟಿಕ್ ಪೈಪನ್ನು ನಮ್ಮ ಸಮಕ್ಷಮ ವಶಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನನಗೆ ಈ ಪ್ರಕರಣದ ಬಗ್ಗೆ ಎಲ್ಲಾ ಮಾಹಿತಿ ಇದ್ದರೂ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆಂದರೆ ಸರಿಯಲ್ಲ. ಈ ಘಟನೆಯ ಸಂಬಂಧ ನಾನು ಪೊಲೀಸರ ಮುಂದೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಹೇಳಿಕೆ ನೀಡಿಲ್ಲ ಎಂದು ತಿಳಿಸಿದ್ದರಿಂದ ಸಾಕ್ಷಿಯ ಹೇಳಿಕೆಯನ್ನು ಅಭಿಯೋಜನೆಯ ಪರವಾಗಿ ನಿಪಿ.5 ಎಂದು , ಅದರಲ್ಲಿರುವ ಆಯ್ದ ಭಾಗವನ್ನು ನಿಪಿ.5(ಎ) ಎಂದು ಗುರುತಿಸಲಾಯಿತು. ನನಗೆ ಈ ಪ್ರಕರಣದ ಬಗ್ಗೆ ಎಲ್ಲಾ ಮಾಹಿತಿ ಇದ್ದರು ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀಸವಾಲು ಃ ಆರೋಪಿ ಪರ ವಕೀಲರಿಂದ

ಆರೋಪಿ ಪರ ವಕೀಲರು ಪಾಟೀಸವಾಲು ಇಲ್ಲಎಂದು ತಿಳಿಸಿದ್ದರಿಂದ ಪಾಟೀಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

ಮರು ವಿಚಾರಣೆ ಇಲ್ಲ.

ನನ್ನ ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಸಾ.ಓ.ಹೇ.ಸ.ಒ

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆಎಂಎಫ್‌ಸಿ., ಶ್ರೀರಂಗಪಟ್ಟಣ.